# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

**ಪತ್ರಿಕಾ ಪ್ರಕಟಣೆ** **ದಿನಾಂಕ: 25.07.2019**

## ***ಪೂಜ್ಯ ಮಹಾಪೌರರ ಅಧ್ಯಕ್ಷತೆಯಲ್ಲಿ ಎಲ್ಲ ಶಾಲಾ ಮುಖ್ಯಸ್ಥರುಗಳ ಜೊತೆ ಸಭೆ:***

ಪೂರ್ವ ವಲಯದಲ್ಲಿ ಪ್ಲಾಸ್ಟಿಕ್ ಬಳಕೆ ನಿಷೇಧ, ಕಸ ವಿಂಗಡಣೆ, ಪಿಒಪಿ ಗಣೇಶ ಮೂರ್ತಿ ಬದಲು ಮಣ್ಣಿನ ಗಣೇಶ ಮೂರ್ತಿಗಳನ್ನು ಉಪಯೋಗಿಸುವುದು ಹಾಗೂ ನೀರನ್ನು ಮಿತವಾಗಿ ಬಳಸಿ ಪರಿಸರ ಸಂರಕ್ಷಣೆ ಮಾಡುವ ಕುರಿತು ಪೂಜ್ಯ ಮಹಾಪೌರರ ಅಧ್ಯಕ್ಷತೆಯಲ್ಲಿ ಬುಧವಾರ ಮಲ್ಲೇಶ್ವರ ಐಪಿಪಿ ಕೇಂದ್ರದಲ್ಲಿ ಎಲ್ಲ ಶಾಲಾ ಮುಖ್ಯಸ್ಥರ ಜೊತೆ ಸಭೆ ನಡೆಯಿತು. ಈ ವೇಳೆ ಮಾನ್ಯ ಆಡಳಿತ ಪಕ್ಷದ ನಾಯಕರು, ಜಂಟಿ ಆಯುಕ್ತರು, ಸಹಾಯಕ ಆಯುಕ್ತರು(ಶಿಕ್ಷಣ), ಶಿಕ್ಷಣ ವಿಭಾಗದ ಅಧಿಕಾರಿ, ಮುಖ್ಯ ಇಂಜಿನಿಯರ್‌ಗಳು, ಪಾಲಿಕೆ ಆರೋಗ್ಯಾಧಿಕಾರಿಗಳು, ಎಲ್ಲ ಶಾಲಾ ಮುಖ್ಯಸ್ಥರುಗಳು ಹಾಗೂ ಇತರೆ ಗಣ್ಯರುಗಳು ಇದ್ದರು.

ನಗರದಲ್ಲಿ ಪರಿಸರ ಸಂರಕ್ಷಣೆ ಮತ್ತು ಸ್ವಚ್ಛತೆ ಕಾಪಾಡುವ ಬಗ್ಗೆ ಶಿಕ್ಷಕರು ಎಲ್ಲಾ ಮಕ್ಕಳಲ್ಲಿ ಅರಿವು ಮೂಡಿಸಿದಾಗ ಅವರು ಸಮಾಜಕ್ಕೆ ಉತ್ತಮ ಸಂದೇಶ ರವಾನಿಸುತ್ತಾರೆ ಎಂದು ಮಹಾಪೌರರು ತಿಳಿಸಿದರು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಮಹಾಪೌರರು, ಮಕ್ಕಳು ಮನೆಗಳಲ್ಲಿರುವುದಕ್ಕಿಂತ ಶಾಲೆಗಳಲ್ಲಿಯೇ ಹೆಚ್ಚು ಕಾಲ ಕಳೆಯುತ್ತಾರೆ. ಶಿಕ್ಷಕರು ಹೇಳುವ ವಿಷಯವನ್ನು ಗ್ರಹಿಸುವುದರ ಜೊತೆಗೆ ಚಾಚು ತಪ್ಪದೆ ಪಾಲಿಸುತ್ತಾರೆ. ಆದ್ದರಿಂದ ಎಲ್ಲಾ ಮಕ್ಕಳಲ್ಲೂ ಪ್ಲಾಸ್ಟಿಕ್ ಮುಕ್ತ ಬೆಂಗಳೂರು, ಪಿಒಪಿ ಗಣೇಶ ಬದಲು ಮಣ್ಣಿನ ಮೂರ್ತಿಗಳ ಬಳಕೆ, ನೀರು ಮಿತ ಬಳಕೆ, ಕಡ್ಡಾಯ ಕಸ ವಿಂಗಡಣೆ ಹಾಗೂ ಡೆಂಗೀ ಪ್ರಕರಣ ತಡೆಯುವ ಬಗ್ಗೆ ಅರಿವು ಮೂಡಿಸಬೇಕೆಂದು ಎಲ್ಲಾ ಶಾಲಾ ಮುಖ್ಯಸ್ಥರುಗಳಿಗೆ ಸೂಚಿಸಿದರು.

ಪ್ಲಾಸ್ಟಿಕ್ ಮುಕ್ತ ಬೆಂಗಳೂರನ್ನಾಗಿಸಲು ಬಿಬಿಎಂಪಿ ಪಣತೊಟ್ಟಿದ್ದು, ಜುಲೈ 15 ರಿಂದ ಆಂದೋಲನ ನಡೆಸಲಾಗುತ್ತಿದೆ. ಪಾಲಿಕೆ ಆರೋಗ್ಯಾಧಿಕಾರಿಗಳು ನಿತ್ಯ ಅನಿರೀಕ್ಷಿತ ಸ್ಥಳಗಳಿಗೆ ದಿಢೀರ್ ಭೇಟಿ ನೀಡಿ ಪ್ಲಾಸ್ಟಿಕ್ ಉತ್ಪನ್ನಗಳನ್ನು ಜಪ್ತಿ ಮಾಡುವ ಜೊತೆಗೆ ದಂಡ ವಿಧಿಸುತ್ತಿದ್ದಾರೆ. ಅದರಂತೆ ಇದುವರೆಗೆ ಸುಮಾರು 13 ಕ್ವಿಂಟಾಲ್ ಪ್ಲಾಸ್ಟಿಕ್ ಜಪ್ತಿ ಮಾಡಿದ್ದು, 25 ಲಕ್ಷ ರೂ.ಗಳಿಗೂ ಹೆಚ್ಚು ದಂಡ ಸಂಗ್ರಹಿಸಿದ್ದಾರೆ. ಆಗಸ್ಟ್ ಒಂದರಿಂದ ಪ್ಲಾಸ್ಟಿಕ್ ಬಳಕೆ ಮಾಡುವವರಿಗೆ ಐದು ಪಟ್ಟು ದಂಡ ವಿಧಿಸಿ ಪ್ಲಾಸ್ಟಿಕ್ ಮುಕ್ತ ನಗರವನ್ನಾಗಿಸಲು ಸೂಕ್ತ ಕ್ರಮ ವಹಿಸಲಾಗುತ್ತಿದೆ ಎಂದು ಹೇಳಿದರು.

ನಗರದಲ್ಲಿ ಕುಡಿಯುವ ನೀರಿನ ಅಭಾವ ಹೆಚ್ಚುತ್ತಿದ್ದು, ಆ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕಿದೆ. ಈಗಾಗಲೇ ವೈಟ್ ಟಾಪಿಂಗ್ ರಸ್ತೆಗಳಲ್ಲಿ ಹಿಂಗು ಗುಂಡಿಗಳನ್ನು ನಿರ್ಮಾಣ ಮಾಡಲಾಗುತ್ತಿದ್ದು, ಉದ್ಯಾನ, ಪಾಲಿಕೆ ಕಚೇರಿಗಳ ಆವರಣಗಳಲ್ಲಿ ಹಿಂಗು ಗುಂಡಿ ನಿರ್ಮಾಣ ಮಾಡುವ ಬಗ್ಗೆ ಪಾಲಿಕೆ ಆಯುಕ್ತರ ಜೊತೆ ಚರ್ಚಿಸಲಾಗಿದೆ. ಅದೇ ರೀತಿ ಎಲ್ಲರೂ ಕಟ್ಟಡ ನಿರ್ಮಾಣ ಮಾಡುವ ವೇಳೆ ಹಿಂಗು ಗುಂಡಿಗಳನ್ನು ನಿರ್ಮಾಣ ಮಾಡಿದರೆ ಅಂತರ್ಜಲ ಮಟ್ಟ ಹೆಚ್ಚುತ್ತದೆ. ಕುಡಿಯುವ ನೀರನ್ನು ಮಿತವಾಗಿ ಬಳಸಿ, ಕೊಳವೆ ಬಾವಿ ಹಾಗೂ ಸಂಸ್ಕರಿಸಿದ ನೀರನ್ನು ಇತರೆ ಕಾರ್ಯಗಳಿಗೆ ಬಳಕೆ ಮಾಡಿಕೊಳ್ಳಬೇಕು ಎಂದರು.

ಕಸದ ಸಮಸ್ಯೆ ನಿವಾರಣೆ ಮಾಡುವ ಉದ್ದೇಶದಿಂದ ಹೊಸ ಟೆಂಡರ್ ಪ್ರಕ್ರಿಯೆ ಸೆಪ್ಟೆಂಬರ್ ಒಂದರಿಂದ ಜಾರಿಗೊಳಿಸಲಾಗುತ್ತಿದೆ. ಆ ಬಳಿಕ ಹಸಿ ಹಾಗೂ ಒಣ ಕಸವನ್ನು ಪ್ರತ್ಯೇಕವಾಗಿ ವಿಂಗಡಿಸಿ ಕೊಡಬೇಕು. ಇಲ್ಲವಾದರೆ ದುಪ್ಪಟ್ಟು ದಂಡ ವಿಧಿಸಲಾಗುತ್ತದೆ. ಪಿಒಪಿ ಗಣೇಶ ಮೂರ್ತಿಗಳ ಬದಲು ಮಣ್ಣಿನ ಮೂರ್ತಿಗಳನ್ನು ಬಳಸಿ ಪರಿಸರದ ಮೇಲೆ ದುಷ್ಪರಿಣಾಮ ಬೀರುವುದನ್ನು ತಡೆಯಬೇಕು. ಡೆಂಗೀ ಪ್ರಕರಣಗಳು ನಗರದಲ್ಲಿ ಹೆಚ್ಚಾಗುತ್ತಿದ್ದು, ಅದನ್ನು ತಡೆಯಲು ಎಲ್ಲಾ ವಾರ್ಡ್ ಗಳ ಸದಸ್ಯರುಗಳ ಜೊತೆ ಸಭೆ ನಡೆಸಿ ಫಾಗಿಂಗ್ ಮತ್ತು ಔಷಧಿ ಸಿಂಪಡಿಸುವ ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿ ಸೊಳ್ಳೆಗಳ ಉತ್ಪತ್ತಿ ತಾಣಗಳನ್ನು ನಿಯಂತ್ರಣ ಮಾಡಬೇಕೆಂದು ಆರೋಗ್ಯಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ಮೇಲಿನ ಎಲ್ಲಾ ಅಂಶಗಳ ಬಗ್ಗೆ ಪಾಲಿಕೆಯಿಂದ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಅದರ ಜೊತೆಗೆ ಎಲ್ಲಾ ಶಾಲಾ ಮಕ್ಕಳು ಕೈಜೋಡಿಸಿ ಆ ಬಗ್ಗೆ ಅರಿವು ಮೂಡಿಸಲು ಮುಂದಾದಾಗ ಪರಿಣಾಮಕಾರಿಯಾಗಿ ಯಶಸ್ವಿಯಾಗಲಿದೆ. ಈ ಸಂಬಂಧ ನಗರದ ಎಂಟು ವಲಯಗಳಲ್ಲೂ ಜಾಥಾ ಕಾರ್ಯಕ್ರಮ ಆಯೋಜಿಸಲಾಗುತ್ತಿದ್ದು, ಈಗಾಗಲೇ ದಕ್ಷಿಣ ವಲಯದ ಎಲ್ಲಾ 44 ವಾರ್ಡ್ ಗಳಲ್ಲಿಯೂ ಶಾಲಾ ಮಕ್ಕಳ ಸಹಯೋಗದಲ್ಲಿ ಯಶಸ್ವಿಯಾಗಿ ಜಾಥಾ ಕಾರ್ಯಕ್ರಮ ನಡೆಸಲಾಗಿದೆ. ಅದೇ ರೀತಿ ಪಶ್ಚಿಮ ವಲಯದಲ್ಲಿ ಇದೇ ಶನಿವಾರ ಜಾಥಾ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದರು.

ಪೂರ್ವ ವಲಯದಲ್ಲಿ ಆಗಸ್ಟ್ 3 ರಂದು ಜಾಥಾ ಕಾರ್ಯಕ್ರಮ ನಡೆಸಲಾಗುವುದು. ಅದಕ್ಕೆ ಬಿಬಿಎಂಪಿ, ಸರ್ಕಾರಿ ಹಾಗೂ ಖಾಸಗಿ ಶಾಲೆಗಳ ಮಕ್ಕಳು ಜಾಥಾದಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಹೇಳಿದರು.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**




